ದಿನಾಂಕ 02-04-2026 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಮೇಲ್ಮನವಿದಾರರ ಪರ ವಕೀಲರಿಂದಃ-

ಎಫ್ ಡಿ ಪಿ 13/2015 ರ ಕಡತವನ್ನು ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ರಾಮನಗರ ರವರಿಂದ ತರಿಸಿಕೊಳ್ಳಲಾಯಿತು. ಸದರಿ ಪ್ರಕರಣದಲ್ಲಿ ನಾವು ವಸಂತಮ್ಮರವರ ಶಾಲೆಯ ವರ್ಗಾವಣೆ ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆ ಆ ಕಡತದಲ್ಲಿ ಲಭ್ಯವಿದ್ದು ಅದನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸಲು ಕೋರುತ್ತೇನೆ. ಸದರಿ ವರ್ಗಾವಣೆ ಪ್ರಮಾಣ ಪತ್ರವನ್ನು ನಿಶಾನೆ ಡಿ-55 ಎಂದು ಗುರುತಿಸಲಾಯಿತು. ಆದ್ದರಿಂದ ಮಧ್ಯಂತರ ಅರ್ಜಿ ಸಂಖ್ಯೆ 2/2015 ನ್ನು ಪುರಸ್ಕರಿಸುವಂತೆ ಕೋರುತ್ತೇನೆ.

ಎದುರುದಾರರು ಮತ್ತು ಅವರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲನ್ನು ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಲೋಕೇಶ)**
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.